# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಬುಧವಾರ ೨೬, ನವೆಂಬರ್, ೨೦೨೫ ( ಮಾರ್ಗಶಿರಾ , ೦೫, ಶಕವರ್ಷ, ೧೯೪೭)<br>BENGALURU, WEDNESDAY 26, NOVEMBER, 2025 (MARGASHIRA , 05, SHAKAVARSHA, 1947) | ನಂ. ೭೫೮<br>No. 758 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಬೆಳಗಾವಿ ಜಿಲ್ಲೆಯ ಹುಕ್ಕೇರಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸುವ ಬಗ್ಗೆ.

**ಓದಲಾಗಿದೆ**:

1. ಕಡತ ಸಂಖ್ಯೆ: ಲಾ-ಎಲ್‌ಸಿಎಲ್/223/2022.
2. ಸರ್ಕಾರದ ಪತ್ರ ಸಂಖ್ಯೆ: ಲಾ-ಎಲ್‌ಸಿಎಲ್/223/2022, ದಿನಾಂಕ: 07-11-2025.
3. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ರವರ ಕಛೇರಿ ಪತ್ರ ಸಂಖ್ಯೆ: RK/19643/2025, ದಿನಾಂಕ: 21-11-2025.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಕಡತದಲ್ಲಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು ನೋಟರಿ ಹುದ್ದೆಯನ್ನು ಸೃಜಿಸಲು ಪ್ರಸ್ತಾಪಿಸಿಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಪತ್ರದಲ್ಲಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆ ಸೃಜಿಸುವ ಬಗ್ಗೆ ಅಭಿಪ್ರಾಯವನ್ನು ತಿಳಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರನ್ನು ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ : 21-11-2025 ಪತ್ರದಲ್ಲಿ ಬೆಳಗಾವಿ ಜಿಲ್ಲೆಯ ಹುಕ್ಕೇರಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿ ನೋಟರಿ ಹುದ್ದೆಯನ್ನು ಸೃಜಿಸಬಹುದಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರು ಅಭಿಪ್ರಾಯ ತಿಳಿಸಿರುತ್ತಾರೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಳಗಾವಿ ಜಿಲ್ಲೆ ಇವರ ಅಭಿಪ್ರಾಯದನ್ವಯ ನೋಟರಿಗಳ ನಿಯಮಗಳು, 1956ರ ನಿಯಮ 8(4A) ರನ್ವಯ ಹೆಚ್ಚುವರಿ ನೋಟರಿ ಹುದ್ದೆಯನ್ನು ಸೃಜಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**ಸರ್ಕಾರದ ಆದೇಶ ಸಂಖ್ಯೆ: ಲಾ - ಎಲ್‌ಸಿಎಲ್/223/2022,**
**ಬೆಂಗಳೂರು, ದಿನಾಂಕ : 26-11-2025**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆಯ ಹುಕ್ಕೇರಿ ಕಂದಾಯ ತಾಲ್ಲೂಕಿಗೆ ಹೆಚ್ಚುವರಿಯಾಗಿ ಒಂದು (01) ನೋಟರಿ ಹುದ್ದೆಯನ್ನು ಸೃಜಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಆದಿನಾರಾಯಣ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು, ನ್ಯಾಯ ಮತ್ತು
ಮಾನವ ಹಕ್ಕುಗಳ ಇಲಾಖೆ (ಆಡಳಿತ-2).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH